# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಎಂ.ಸಾವಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಇವರ ವಿರುದ್ಧ ಇಲಾಖಾ ವಿಚಾರಣೆ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , ಜಿಲ್ಲಾ ಪಂಚಾಯತ್, ಬಾಗಲಕೋಟೆ ರವರ ಪತ್ರ ಜಿಪಂಬಾ/ಅಭಿ/ಗ್ರಾನೀಸ/ವಿನಿದಿ /2015-16 ದಿನಾಂಕ 28.02.2017.

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ರವರು ಬಾಗಲಕೋಟೆ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಬಾಗಲಕೋಟೆ, ಹುನಗುಂದ, ಬೀಳಗಿ ಮುಧೋಳ, ಹಾಗೂ ಜಮಖಂಡಿ ತಾಲ್ಲೂಕುಗಳಲ್ಲಿ ಕೆರೆಗಳ ಪುನರುಜ್ಜೀವನ ಯೋಜನೆಯಡಿ ಕೈಗೊಂಡ ಕಾಮಗಾರಿಗಳನ್ನು ಲೋಕೋಪಯೋಗಿ ಸಂಹಿತೆ ಪ್ರಕಾರ ನಿರ್ವಹಿಸದೇ ನಿಯಮಗಳನ್ನು ಉಲ್ಲಂಘಿಸಿ ನಿಯಮ ಬಾಹಿರವಾಗಿ ಹಣ ಪಾವತಿಸಿರುವ ಆರೋಪಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಆಪಾದಿತ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಕೋರಿ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಯನ್ನು ತಯಾರಿಸಿ ಸಲ್ಲಿಸಿರುತ್ತಾರೆ:-

*1) ಶ್ರೀ ಮನೋಹರ ಮಂದೋಲಿ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಾಗಲಕೋಟೆ.*

*2) ಶ್ರೀ ಎಂ.ಕೆ.ಕಕರಡ್ಡಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಾಗಲಕೋಟೆ.*

*3) ಶ್ರೀ ಮಹಾದೇವಪ್ಪ ಪಾಟೀಲ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುನಗುಂದ.*

*4) ಶ್ರೀ ಎಸ್.ಎಂ.ಸಾವಳಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬೀಳಗಿ (ಹಾಲಿ ನಿವೃತ್ತ)*

*5) ಶ್ರೀ ಸುರೇಂದ್ರ ದೊಡ್ಡಮನಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಧೋಳ.*

*6) ಶ್ರೀ ಅಶೋಕ ಪಾಟೀಲ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜಮಖಂಡಿ.*

ಮೇಲ್ಕಂಡ ಆಪಾದಿತ ಅಧಿಕಾರಿಗಳ ಪೈಕಿ ಕ್ರಮ ಸಂಖ್ಯೆ (4)ರಲ್ಲಿನ ಶ್ರೀ ಎಸ್.ಎಂ.ಸಾವಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ತಮ್ಮ ಕರ್ತವ್ಯ ನಿರ್ವಹಣೆಯ ಅವಧಿಯಲ್ಲಿ ನಿಯಮಗಳನ್ನು ಉಲ್ಲಂಘಿಸಿ ನಿಯಮ ಬಾಹಿರವಾಗಿ ರೂ.26,35,953/- ಗಳನ್ನು ಪಾವತಿಸಿ ದುರ್ನಡತೆ ಎಸಗಿರುವ ಬಗ್ಗೆ ಆರೋಪಿಸಲಾಗಿದೆ. ಸದರಿಯವರು ಸೇವೆಯಿಂದ ನಿವೃತ್ತರಾಗಿರುವುದರಿಂದ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ನಡೆಸುವ ಸಲುವಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರಡಿ ಮಂಜೂರಾತಿ ನೀಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ ಗ್ರಾಅಪ 69 ಇಎನ್‌ಕ್ಯೂ 2015 ಬೆಂಗಳೂರು, ದಿನಾಂಕ 03.05.2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಎಸ್.ಎಂ.ಸಾವಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ,

ಮು.ತಿ.ನೋ.

ಬೀಳಗಿ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಎಸಗಿರುವರೆನ್ನಲಾದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ ನಿಯಮ 11 ಮತ್ತು 11-ಎ ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನವನ್ನು ಅನುಸರಿಸಿ ಇಲಾಖಾ ವಿಚಾರಣೆ ನಡೆಸಲು ಮಂಜೂರಾತಿಯನ್ನು ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

3/5/2017

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ.
6. ಶ್ರೀ ಎಸ್.ಎಂ.ಸಾವಳಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬೀಳಗಿ (ಹಾಲಿ ನಿವೃತ್ತ) ಇವರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರ ಮುಖಾಂತರ.
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
8. ಗ್ರಾ.ಅ.ಪಂ.ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
9. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
10. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.